ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಗುಡೇಕೋಟೆ

ಸಂ/ಕಂ/ಹ.ಬ./ನಾಕಗು/39/2014-15. ದಿನಾಂಕ:12-09-2016.

| ವಾದಿಗಳು | ಪ್ರತಿವಾದಿಗಳು |
|---|---|
| ಎ.ಸತ್ಯನಾರಾಯಣ ಮೂರ್ತಿ ತಂದೆ ಲೇಟ್ ಭೀಮಣ್ಣ ಸಿಡೇಗಲ್ಲು ಗ್ರಾಮ ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು ಗುಡೇಕೋಟೆ |
| ಕೂಡ್ಲಿಗಿ ತಾಲೂಕು ಸಿಡೇಗಲ್ಲು ಗ್ರಾಮದ ಸನಂ 293ಬಿಪೈಕಿ. ವಿಸ್ತೀರ್ಣ 2-81. ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಸಿಡೇಗಲ್ಲು ಗ್ರಾಮದ ಸನಂ 293ಬಿಪೈಕಿ. ವಿಸ್ತೀರ್ಣ 2-81. ಎಕ್ರೆ ಜಮೀನನ್ನು ಸದರಿ ಗ್ರಾಮದ ಎ.ಸತ್ಯನಾರಾಯಣ ಮೂರ್ತಿ ತಂದೆ ಲೇಟ್ ಭೀಮಣ್ಣ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಸಿಡೇಗಲ್ಲು ಇವರು ನಮೂನೆ-21 ನೋಟಿಸನ್ನು ದಿನಾಂಕ 12-02-2013. ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ವಂಶವೃಕ್ಷದಲ್ಲಿ ವ್ಯತ್ಯಾಸವಿರುವುದರಿಂದ ಈ ಪ್ರಕರಣವನ್ನು ಎಂ.ಆರ್.ನಂಬರ್: 02/2013-14. ದಿನಾಂಕ 03-01-2014. ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 06-01-2015. ರಿಂದ 12-09-2016. ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರ ಹಾಜರಾಗಿರುತ್ತಾರೆ. ಅರ್ಜಿದಾರರು ಸಿಡೇಗಲ್ಲು ಗ್ರಾಮದ ಸನಂ 293ಬಿಪೈಕಿ. ವಿಸ್ತೀರ್ಣ 2-81 ಎಕ್ರೆ ಜಮೀನು ನಮ್ಮ ತಂದೆಯವರಾದ ಭೀಮಣ್ಣ ತಂದೆ ಜಂಬಣ್ಣ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ದಿನಾಂಕ 12-01-1995 ರಂದು ಹಾಗೂ ನಮ್ಮ ತಾಯಿಯವರಾದ ಶಿವರುದ್ರಮ್ಮ ಗಂಡ ಭೀಮಣ್ಣ ಇವರು ದಿನಾಂಕ 11-03-2006 ರಂದು ನಿಧನ ಹೊಂದಿರುತ್ತಾರೆ. ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ನನ್ನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆಗಳನ್ನು ಕೇಳಿ ಅರ್ಜಿದಾರರು ಸೂಕ್ತ ದಾಖಲೆಗಳನ್ನು ಸಲ್ಲಿಸಿದ್ದರಿಂದ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

ಪು.ತಿ.ನೋ:-2.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಸಿಡೇಗಲ್ಲು ಗ್ರಾಮದ ಸನಂ 293ಬಿಪೈಕಿ. ವಿಸ್ತೀರ್ಣ 2-81. ಎಕ್ರೆ ಜಮೀನನ್ನು ಪೋತಿವಾರಸು ಹಕ್ಕಿನ ಪ್ರಕಾರ ಅರ್ಜಿದಾರರಾದ ಎ.ಸತ್ಯನಾರಾಯಣ ಮೂರ್ತಿ ತಂದೆ ಲೇಟ್ ಭೀಮಣ್ಣ ಇವರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 12-09-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ, ಗುಡೇಕೋಟೆ.

ಇದರ ಪ್ರತಿಯನ್ನು:

1) ಅರ್ಜಿದಾರರಾದ ಎ.ಸತ್ಯನಾರಾಯಣ ಮೂರ್ತಿ ತಂದೆ ಲೇಟ್ ಭೀಮಣ್ಣ ಸಿಡೇಗಲ್ಲು ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಗುಡೇಕೋಟೆ ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.